ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–303

**29 ಜುಲೈ 2023 * ಶನಿವಾರ * ಸಂಜೆ 6.00**

**ಸ್ಥಳ : ನಂ. 21, 'ಆಶೀರ್ವಾದ ನಿಲಯ', 4ನೇ ಬ್ಲಾಕ್**
**ಮೊದಲನೇ ಹಂತ, ಜೆಎಸ್‌ಎಸ್ ಬಡಾವಣೆ, ಮೈಸೂರು–29**

---

### ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

### ಅಧ್ಯಕ್ಷತೆ

**ಶ್ರೀ ಬಿ. ಮಂಜುನಾಥ್**
ಉಪನಿರ್ದೇಶಕರು, ಜಿಲ್ಲಾ ಮತ್ತು ನಗರ ಕೇಂದ್ರ ಗ್ರಂಥಾಲಯ, ಮೈಸೂರು

### ಉಪನ್ಯಾಸ

**ಡಾ. ಕೆ. ಅನಂತರಾಮು**
ವಿಶ್ರಾಂತ ಪ್ರಾಧ್ಯಾಪಕರು, ಮೈಸೂರು

**ವಿಷಯ : ಶೂನ್ಯ ಸಂಪಾದನೆ**

ಭಜನೆ : ಅಕ್ಕಮಹಾದೇವಿ ಮಹಿಳಾ ಬಳಗ, ಜೆಎಸ್‌ಎಸ್ 1ನೇ ಹಂತ, ಮೈಸೂರು

---

### ಪ್ರಾಯೋಜಕರು

**ಶ್ರೀಮತಿ ಮಹೇಶ್ವರಿ ಮತ್ತು ಶ್ರೀ ವೆಂಕಟೇಶಪ್ಪ**
ನಂ. 21, 'ಆಶೀರ್ವಾದ ನಿಲಯ', 4ನೇ ಬ್ಲಾಕ್
ಮೊದಲನೇ ಹಂತ, ಜೆಎಸ್‌ಎಸ್ ಬಡಾವಣೆ, ಮೈಸೂರು–29

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಬಿ. ಮಂಜುನಾಥ್‌ರವರ** ಜನ್ಮಸ್ಥಳ ಹೆಗ್ಗಡದೇವನ ಕೋಟೆ. ಮೈಸೂರು ವಿಶ್ವವಿದ್ಯಾನಿಲಯ ದಿಂದ ಚಿನ್ನದ ಪದಕದೊಂದಿಗೆ ಎಂಎಲ್‌ಐಎಸ್ಸಿ ಪದವಿ ಪಡೆದಿದ್ದಾರೆ. 1997ರಲ್ಲಿ ಶ್ರೀ ಸುತ್ತೂರು ಕ್ಷೇತ್ರದ ಜೆಎಸ್‌ಎಸ್ ವಸತಿ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಮತ್ತು ಗ್ರಂಥಪಾಲಕರಾಗಿ ವೃತ್ತಿ ಜೀವನವನ್ನು ಆರಂಭಿಸಿದರು. 1999ರಲ್ಲಿ ನೋಯಿಡಾದ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಅಕಾಡೆಮಿಯಲ್ಲಿ ಗ್ರಂಥಪಾಲಕರಾಗಿ ಸೇವೆ ಮುಂದುವರಿಸಿದ್ದರು. 2005ರಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ ಮುಖ್ಯ ಗ್ರಂಥಾಲಯಾಧಿಕಾರಿಗಳಾಗಿ ಆಯ್ಕೆಗೊಂಡು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸಿ, ಪ್ರಸ್ತುತ ಮೈಸೂರಿನ ಜಿಲ್ಲಾ ಮತ್ತು ನಗರ ಕೇಂದ್ರ ಗ್ರಂಥಾಲಯದ ಉಪ ನಿರ್ದೇಶಕರಾಗಿರುವರು.

**ಡಾ. ಕೆ. ಅನಂತರಾಮುರವರು** ಕನ್ನಡ, ಹಿಂದಿ ಹಾಗೂ ಭಾಷಾ ವಿಜ್ಞಾನ ವಿಷಯಗಳಲ್ಲಿ ಮೊದಲನೆಯ ಸ್ಥಾನ ಮತ್ತು ಶ್ರೇಣಿಯೊಂದಿಗೆ ಎಂಎ ಪದವಿಗಳನ್ನು ಹಾಗೂ ಜೈನಶಾಸ್ತ್ರದಲ್ಲಿ ಪಿಎಚ್‌ಡಿ ಪಡೆದಿರುವರು. ಮೈಸೂರು ವಿಶ್ವವಿದ್ಯಾನಿಲಯದ ಸಂಜೆ ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ್ದಾರೆ. ಉದಯರವಿಯ ನಾಡಿನಲ್ಲಿ, ಸಕ್ಕರೆಯ ಸೀಮೆ, ದಕ್ಷಿಣದ ಸಿರಿನಾಡು, ದೇವರ ದಾಸಿಮಯ್ಯ, ಅಜಾತ ನಾಗಲಿಂಗಸ್ವಾಮಿ, ಯುಗಪುರುಷ ಮೌನೇಶ್ವರ, ಶ್ರೀಗುರು ದತ್ತಾತ್ರೇಯ, ಸ್ವಾಮಿ ವಿವೇಕಾನಂದರ ಕಥಾಸಂಚಯ ಮುಂತಾದ ಕೃತಿಗಳನ್ನು ರಚಿಸಿದ್ದಾರೆ. ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಶ್ರೀ  ಮಠವೂ ಸೇರಿದಂತೆ ಹಲವಾರು ಮಠಗಳು ಹಾಗೂ ಸಂಘ ಸಂಸ್ಥೆಗಳಲ್ಲಿ ಪ್ರವಚನ ನೀಡುತ್ತಾ ಜನತೆಯಲ್ಲಿ ಧಾರ್ಮಿಕ ಜಾಗೃತಿಯನ್ನುಂಟು ಮಾಡುತ್ತಿದ್ದಾರೆ.

**ಶ್ರೀ ವೆಂಕಟೇಶಪ್ಪನವರು** ಹುಣಸೂರು ತಾಲ್ಲೂಕು ದೊಡ್ಡಬೀಚನಹಳ್ಳಿ ಗ್ರಾಮದವರು. ಜೆಎಸ್‌ಎಸ್ ಪ್ರೌಢಶಾಲೆಗಳಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿರುವರು. ಧರ್ಮಪತ್ನಿ ಶ್ರೀಮತಿ ಮಹೇಶ್ವರಿರವರು ಗೃಹಿಣಿಯಾಗಿದ್ದಾರೆ. ಪುತ್ರಿಯರುಗಳಾದ ಶ್ರೀಮತಿ ವಿ. ಕಾವ್ಯಶ್ರೀಯವರು ಕರ್ನಾಟಕ ಸರ್ಕಾರದ ನೀರಾವರಿ ಇಲಾಖೆಯಲ್ಲಿ ಸಹಾಯಕ ಇಂಜಿನಿಯರರಾಗಿದ್ದಾರೆ. ಕು. ವಿ. ದಿವ್ಯಶ್ರೀಯವರು ಅಮೇರಿಕದಲ್ಲಿ ಸಾಫ್ಟ್‌ವೇರ್ ಇಂಜಿನಿಯರ್‌ರಾಗಿರುವರು. ಪುತ್ರ ಶ್ರೀ ವಿ. ಶಿವಚೇತನ್‌ರವರು ತಿರುಪತಿಯ ಐಐಟಿಯಲ್ಲಿ ಪಿಎಚ್‌ಡಿ ಮಾಡುತ್ತಿದ್ದಾರೆ.